ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

# ಸಿಡಿ ಪ್ರಕರಣ: ಆರೋಪಿ ನರೇಶ್ ಪತ್ನಿಯ ವಿಚಾರಣೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಿಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ಕಿಂಗ್‌ಪಿನ್ ಎನ್ನಲಾದ ನರೇಶ್ ಗೌಡ ಪತ್ನಿ ಮತ್ತು ತಾಯಿಯನ್ನು ತುಮಕೂರು ಜಿಲ್ಲೆಯ ಶಿರಾ ಠಾಣೆಯಲ್ಲಿ ಎಸ್‌ಐಟಿ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ಬೆಂಗಳೂರಿನ ನರೇಶ್ ನಿವಾಸದಲ್ಲಿ ಪತ್ತೆಯಾಗಿದ್ದ ಬಿಲ್‌ಗಳು, ಚಿನ್ನ ಖರೀದಿಸಿದ ದಾಖಲೆ ಮತ್ತು ಚಿನ್ನಾಭರಣದ ಬಗ್ಗೆ ದಾಖಲೆ ಸಮೇತ ತೆರಳಿದ್ದ ಎಸ್‌ಐಟಿ ಅಧಿಕಾರಿಗಳು ನರೇಶ್ ಪತ್ನಿಯನ್ನು ವಿಚಾರಣೆ ನಡೆಸಿದ್ದಾರೆ. ಡಿ ಇದುವರೆಗೂ ಆರೋಪಿ ನರೇಶ್ ಪತ್ತೆಯಾಗದ ಹಿನ್ನೆಯಲ್ಲಿ ಅವರ ಮನೆಯವರನ್ನು ವಿಚಾರಣೆ ನಡೆಸಿದ ಅಧಿಕಾರಿಗಳು ಪತಿ ನರೇಶ್ ಬಗ್ಗೆ ಮಾಹಿತಿಯನ್ನು ಪಡೆದಿದ್ದಾರೆ. ನರೇಶ್ ನಿಮ್ಮ ಜತೆ ಸಂಪರ್ಕದಲ್ಲಿ ಇದಾರ ಎನ್ನುವ ಬಗ್ಗೆ ನರೇಶ್ ಪತ್ನಿ ಮತ್ತು ತಾಯಿ ಜತೆ ಮಹಿಳಾ ಇನ್‌ಸ್ಪೆಕ್ಟರ್ ಅಂಜುಮಾಲಾ ನಾಯ್ಕ್ ತೀವ್ರ ವಿಚಾರಣೆ ನಡೆಸಿದ್ದಾರೆ.



ಈ ಹಿಂದೆಯೂ ಕೂಡ ಸಿಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ಭುವನಹಳ್ಳಿಯಲ್ಲಿರುವ ನರೇಶ್ ಅವರ ಮನೆಯ ಮೇಲೆ ದಾಳಿ ನಡೆಸಿದ ಎಸ್‌ಐಟಿ ಅಧಿಕಾರಿಗಳು ಮನೆಯವರನ್ನು ವಿಚಾರಣೆ ನಡೆಸಿದ್ದರು. ಇನ್‌ಸ್ಪೆಕ್ಟರ್ ಅಂಜುಮಾಲಾ ನಾಯ್ಕ್ ನೇತೃತ್ವದಲ್ಲಿ ವಿಚಾರಣೆ ನಡೆಸಲಾಗಿತ್ತು. ಸುಮಾರು 1 ಗಂಟೆ ಕಾಲ ನರೇಶ್ ಪತ್ನಿ ಮತ್ತು ತಾಯಿಯನ್ನು ಅಧಿಕಾರಿಗಳು ವಿಚಾರಣೆಗೆ ಒಳಪಡಸಿದ್ದರು.

ಈ ಹಿಂದೆ ವಿಚಾರಣೆಗೆ ಹಾಜರಾಗಲು ನರೇಶ್ ಪತ್ನಿಗೆ ನೋಟಿಸ್ ಸಹ ನೀಡಲಾಗಿತ್ತು. ಆದರೆ, 1 ತಮಗೆ ವರ್ಷದ ಮಗುವಿದೆ ಮತ್ತು ನಮ್ಮ ಅತ್ತೆಗೆ ಹುಷಾರಿಲ್ಲ ಎಂದು ವಿಚಾರಣೆಗೆ ಬಂದಿರಲಿಲ್ಲ. ಈ ಕುರಿತು, ವಕೀಲರ ಮೂಲಕ ಎಸ್‌ಐಟಿಗೆ ಮಾಹಿತಿ ನೀಡಲಾಗಿತ್ತು. ನರೇಶ್ ಪತ್ನಿ ವಿಚಾರಣೆಗೆ ಗೈರಾದ ಹಿನ್ನಲೆಯಲ್ಲಿ ಖುದ್ದು ಅಧಿಕಾರಿಗಳೇ ಅವರ ಮನೆಗೆ ತೆರಳಿ, ವಿಚಾರಣೆ ನಡೆಸಿ, ನರೇಶ್ ಪತ್ನಿ ಹೇಳಿಕೆಯನ್ನು ವಿಡಿಯೊ ಹೇಳಿಕೆ ದಾಖಲಿಸಿಕೊಂಡಿದ್ದರು.